**OCTOBER 04, 2023**

**ALL INDIA RADIO- DHARWAD**

**PRADESH SAMACHARA (KANNADA) 7:05 AM**

<><><>

**ಆಕಾಶವಾಣಿ–ಪ್ರದೇಶ ಸಮಾಚಾರ**

<><><>

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು**

<><><>

- ಸೌಹಾರ್ದತೆ ಕಾಪಾಡಲು, ಸರ್ಕಾರದಿಂದ ಅಗತ್ಯ ಕ್ರಮ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಕೇಂದ್ರದ ಮೂರು ಬರ ಅಧ್ಯಯನ ತಂಡಗಳು, ಮುಂದಿನ ವಾರ ರಾಜ್ಯಕ್ಕೆ ಭೇಟಿ – ಎನ್. ಚಲುವರಾಯಸ್ವಾಮಿ.
- ಬಾಪೂಜಿ ಸೇವಾ ಕೇಂದ್ರಗಳಲ್ಲಿ, 44 ಸೇವೆಗಳಿಗೆ ಅವಕಾಶ – ಪ್ರಿಯಾಂಕ್ ಖರ್ಗೆ.
- ವನ್ಯಜೀವಿ ಸಪ್ತಾಹ; ಬೀದರ್‌ನಲ್ಲಿ ಕೃ ಷ್ಣಮೃಗಗಳ ವನ್ಯಧಾಮ, ಶೀಘ್ರ ಸ್ಥಾಪನೆ – ಈಶ್ವರ ಖಂಡ್ರೆ.

<><><>

**ಈಗ ವಾರ್ತೆಗಳ ವಿವರ**

<><><>

**ರಾಜ್ಯದಲ್ಲಿ ಸೌಹಾರ್ದತೆ ಕಾಪಾಡಲು, ಸರ್ಕಾರ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಾದ್ಯಂತ ಶಾಂತಿ–ಸುವ್ಯವಸ್ಥೆ ಕಾಪಾಡಲು, ಪ್ರಥಮ ಆದ್ಯತೆ ನೀಡುತ್ತಿರುವುದರಾಗಿ ಹೇಳಿದರು. ಪ್ರಜಾಪ್ರಭುತ್ವದಲ್ಲಿ ಪ್ರತಿಭಟನೆ ನಡೆಸುವ ಹಕ್ಕು ಎಲ್ಲರಿಗಿದೆ. ಅದಕ್ಕೆ ಸಕಾರಣವಿರಬೇಕು ಮತ್ತು ಶಾಂತಿಯುವಾಗಿ ಪ್ರತಿಭಟಿಸಬೇಕು ಎಂದು, ಮುಖ್ಯಮಂತ್ರಿ ಸಲಹೆ ನೀಡಿದರು.**

<><><>

**ಶಿವಮೊಗ್ಗ ಹೊರವಲಯದ ರಾಗಿಗುಡ್ಡದಲ್ಲಿ ನಡೆದ ಅಹಿತಕರ ಘಟನೆಗೆ ಸಂಬಂಧಿಸಿದಂತೆ, ಈ ವರೆಗೆ 60 ಜನರನ್ನು ಬಂಧಿಸಲಾಗಿದ್ದು, 24 ಜನರ ಮೇಲೆ ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ರಾಗಿಗುಡ್ಡ ಪ್ರದೇಶದ ಸಂತ್ರಸ್ಥರ ಮನೆಗಳಿಗೆ ಭೇಟಿ ನೀಡಿ, ಬಳಿಕ ಮೆಗ್ಗಾನ್ ಆಸ್ಪತ್ರೆಯಲ್ಲಿ ಗಾಯಾಳುವಿಗೆ**

ಸಾಂತ್ವನ ಹೇಳಿ, ಸುದ್ದಿಗಾರರೊಂದಿಗೆ ಮಾತನಾಡಿದರು. ಕಾನೂನು, ಸುವ್ಯವಸ್ಥೆ ಕಾಪಾಡಲು, ಬಂಧಿತ 60 ಜನರನ್ನು, ಚಿತ್ರದುರ್ಗದ ಜಿಲ್ಲಾ ಕಾರಾಗೃಹಕ್ಕೆ ಸ್ಥಳಾಂತರಿಸಲಾಗಿದೆ. ಪ್ರತಿಬಂಧಕಾಜ್ಞೆ ಶೀಘ್ರ ತೆರವಾಗಲಿದೆ ಎಂದರು.

<><><>

ರಾಜ್ಯದ 195 ತಾಲೂಕುಗಳನ್ನು ಬರ ಪೀಡಿತ ಎಂದು ಘೋಷಿಸಿದ ಹಿನ್ನೆಲೆ, ಮುಂದಿನ ವಾರ ರಾಜ್ಯಕ್ಕೆ ಭೇಟಿ ನೀಡಲಿರುವ, ಕೇಂದ್ರದ ಮೂರು ಬರ ಅಧ್ಯಯನ ತಂಡಗಳಿಗೆ, ಬೆಳೆ ನಷ್ಟ ಮತ್ತು ಬರಗಾಲದ ವಾಸ್ತವ ಸ್ಥಿತಿಯನ್ನು, ವಿವರಿಸಲಾಗುವುದು ಎಂದು ಕೃಷಿ ಖಾತೆ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದ್ದಾರೆ. ಕಲಬುರಗಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ಕಲಬುರಗಿ, ಬೀದರ, ರಾಯಚೂರು, ಯಾದಗಿರಿ, ಬಳ್ಳಾರಿ, ಕೊಪ್ಪಳ ಹಾಗೂ ವಿಜಯನಗರ ಜಿಲ್ಲೆಗಳ ಕೃಷಿ ಅಧಿಕಾರಿಗಳೊಂದಿಗೆ, ಸಚಿವರು ಸಭೆ ನಡೆಸಿದರು.

ಪ್ರಾಥಮಿಕ ವರದಿಗಳ ಪ್ರಕಾರ, 40 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ, 28 ಸಾವಿರ ಕೋಟಿ ರೂಪಾಯಿ ಹಾನಿ ಅಂದಾಜಿಸಲಾಗಿದೆ. 4 ಸಾವಿರ ಕೋಟಿ ರೂಪಾಯಿ ಪರಿಹಾರ ನೀಡುವಂತೆ, ಕೇಂದ್ರಕ್ಕೆ ಪತ್ರ ಬರೆಯಲಾಗಿದೆ ಎಂದು ಸಚಿವರು ತಿಳಿಸಿದರು. ರೈತರಿಗೆ ನ್ಯಾಯಯುತ ಪರಿಹಾರ ಒದಗಿಸಲು ಅಧಿಕಾರಿಗಳು ಮುಂದಾಗಬೇಕು. ರೈತರು ಬೆಳೆ ವಿಮೆ ಮಾಡಿಸಿಕೊಳ್ಳುವಂತೆ, ಇಲಾಖೆ ಅಧಿಕಾರಿಗಳು ಜಾಗ್ರತಿ ಮೂಡಿಸಬೇಕು ಎಂದು ಸಚಿವರು ಸೂಚಿಸಿದರು.

<><><>

ಕೃಷಿ ಮತ್ತು ರೈತ ಕಲ್ಯಾಣ ಖಾತೆ ಸಚಿವಾಲಯದ ಜಂಟಿ ಕಾರ್ಯದರ್ಶಿ, ಅಜೀತ್‌ಕುಮಾರ ಸಾಹು ಅವರ ನೇತೃತ್ವದ, ಕೇಂದ್ರ ಬರ ಅಧ್ಯಯನ ತಂಡ, ಶನಿವಾರ 7ನೇ ತಾರೀಖ ಬಾಗಲಕೋಟೆಗೆ ಭೇಟಿ ನೀಡಲಿದೆ ಎಂದು ಜಿಲ್ಲಾಧಿಕಾರಿ ಕೆ.ಎಂ.ಜಾನಕಿ ತಿಳಿಸಿದ್ದಾರೆ.

<><><>

ವಿಜಯನಗರ ಜಿಲ್ಲೆ, ಹಗರಿಬೊಮ್ಮನಹಳ್ಳಿಯ, ಪಿಂಜಾರು ಹೆಗ್ಡಾಳು ಸಮೀಪದ, ಮ್ಯಾನೋರ್ ಫಾರ್ಮ್‌ನಲ್ಲಿ, 'ಹಸಿರಿನೊಂದಿಗೆ ಮಾತುಕತೆ' ಎಂಬ ವಿಶಿಷ್ಟ ಕಾರ್ಯಕ್ರಮ ಜರುಗಿತು. ಸಾವಯವ ಕೃಷಿ, ಸುಸ್ಥಿರ ಕೃಷಿಯ ಜ್ಞಾನ ವಿನಿಮಯ ಮತ್ತು ಮೌಲ್ಯವರ್ಧನೆ ಕುರಿತು ಸಾವಯವ ಕೃಷಿಕರು ತಮ್ಮ ಅನುಭವ ಹಂಚಿಕೊಂಡರು. 'ಹಸಿರಿನೊಂದಿಗೆ ಮಾತುಕತೆ' ವೈಶಿಷ್ಟ್ಯ ಕುರಿತು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಪ್ರಯೋಗಶೀಲ ಕೃಷಿಕ ವಸಂತ್ ಮಾಲವಿ.

<><><>

ವಸಂತ್ ಮಾಲವಿ ಧ್ವನಿ – 50 ಸೆಕೆಂದುಗಳು

<><><>

ಗ್ರಾಮ ಪಂಚಾಯಿತಿ ಮಟ್ಟದ, ಬಾಪೂಜಿ ಸೇವಾ ಕೇಂದ್ರಗಳಲ್ಲಿ, ಆಧಾರ್ ಸೇರಿದಂತೆ, 44 ಸೇವೆಗಳಿಗೆ ಅವಕಾಶ ಮಾಡಿಕೊಡಲಾಗಿದೆ. ಗ್ರಾಮೀಣ ಜನರು ವಿವಿಧ ಪ್ರಮಾಣಪತ್ರಗಳೂ ಸೇರಿದಂತೆ, ಎಲ್ಲ ಸೇವೆಗಳನ್ನು, ತಮ್ಮ ಗ್ರಾಮದಲ್ಲೇ ಪಡೆದುಕೊಳ್ಳಲು ಈಗ ಅನುಕೂಲವಾಗಿದೆ. ಈ ಮೊದಲು 28 ಸೇವೆಗಳನ್ನು ಸೇವಾ ಕೇಂದ್ರಗಳಲ್ಲಿ ಒದಗಿಸಲಾಗುತ್ತಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೆಚ್ಚುವರಿ ಸೇವೆಗಳಿಗೆ ಅವಕಾಶ ಕಲ್ಪಿಸಲು ಸೂಚಿಸಿದ ಹಿನ್ನೆಲೆ, ಎಲ್ಲ ಪ್ರಮುಖ ಸೇವೆಗಳು ಲಭ್ಯವಾಗಲಿವೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಪ್ರಕೃತಿಯ ಸಮತೋಲನದಲ್ಲಿ ವನ್ಯಜೀವಿಗಳ ಪಾತ್ರ ಮಹತ್ವದ್ದಾಗಿದೆ. ವನ್ಯಜೀವಿಗಳ ಸಂರಕ್ಷಣೆಯ ಬಗ್ಗೆ ಅರಿವು ಮೂಡಿಸುವುದೇ, ವನ್ಯಜೀವಿ ಸಪ್ತಾಹದ ಮುಖ್ಯ ಉದ್ದೇಶ ಎಂದು, ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಬೀದರ್‌ನಲ್ಲಿ ವನ್ಯಜೀವಿ ಸಂರಕ್ಷಣೆಗಾಗಿ ನಡಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಿ, ಮಾತನಾಡಿದ ಸಚಿವರು, ಬೀದರ್ ಜಿಲ್ಲೆಯಲ್ಲಿ ಕೃ ್ಣಮೃಗಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿದ್ದು, ಕೃ ್ಣಮೃಗ ಸಂರಕ್ಷಿತ ಪ್ರದೇಶ ನಿರ್ಮಿಸಲು ಬಜೆಟ್‌ನಲ್ಲಿ ಘೋಷಿಸಲಾಗಿದೆ. ವಿಶೇ ’ವಾಗಿ ಮಕ್ಕಳಲ್ಲಿ ವನ್ಯಜೀವಿಗಳು ಮತ್ತು ಅರಣ್ಯ ಸಂರಕ್ಷಣೆಯ ಬಗ್ಗೆ ತಿಳಿವಳಿಕೆ ಮೂಡಿಸಲು, ಈ ತಿಂಗಳ 8ನೇ ತಾರೀಖಿನ ವರೆಗೆ, ರಾಜ್ಯದಾದ್ಯಂತ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದರು.

<><><>

ಸರ್ಕಾರಿ ಶಾಲೆಗಳಿಗೆ ಸುಂದರ ರೂಪ ಕೊಡಲು, ಹಾಗೂ ಮಕ್ಕಳಿಗೆ ಸ್ವಚ್ಛ ಮತ್ತು ಆಹ್ಲಾದಕರ ವಾತಾವರಣ ನೀಡಲು ಪ್ರಾರಂಭಿಸಿದ ಅಭಿಯಾನವೇ, 'ಬಣ್ಣದರ್ಪಣೆ'. 'ಬಣ್ಣ ನಮ್ಮದು, ಸೇವೆ ನಿಮ್ಮದು. ಬನ್ನಿ, ಸರ್ಕಾರಿ ಶಿಕ್ಷಣ ಸಂಸ್ಥೆಗಳನ್ನು ಸುಂದರವಾಗಿಸೋಣ' ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ಮನವಿ ಮಾಡಿದ್ದಾರೆ. ಹುಬ್ಬಳ್ಳಿ ತಾಲೂಕು ಬ್ಯಾಹಟ್ಟಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆ ಈ ಸಾಲಿಗೆ ಸೇರಿದೆ.

<><><>

ಗ್ರಾಮೀಣ ಭಾಗದ ಮಹಿಳೆಯರು ಹಾಗೂ ಹದಿಹರೆಯದ ವಿದ್ಯಾರ್ಥಿನಿಯರಲ್ಲಿ ಮುಟ್ಟಿನ ನೈರ್ಮಲ್ಯದ ಬಗ್ಗೆ, ಶಿಕ್ಷಕಿಯೋರ್ವರು ಆರಂಭಿಸಿದ, 'ಮುಟ್ಟು ಗುಟ್ಟಲ್ಲ; ಅದೊಂದು ಸಹಜ ಪ್ರಕ್ರಿಯೆ' ಆಂದೋಲನ ರಾಜ್ಯದ ಗಮನ ಸೆಳೆದಿದೆ. ದಕ್ಷಿಣಕನ್ನಡ ಜಿಲ್ಲೆಯ ಸುಳ್ಯ ತಾಲೂಕಿನ ಆಲೆಟ್ಟಿ ಗ್ರಾಮದ, ಕೊಲಚಾರು ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ, ಸಹ ಶಿಕ್ಷಕಿ ಜಲಜಾಕ್ಷಿ ಕುಕ್ಕುಜೆ, ಈ ಆಂದೋಲನದ ರೂವಾರಿ. 75 ಸಾವಿರ ರೂಪಾಯಿ ಸ್ವಂತ ಹಣದಲ್ಲಿ, 300ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಮುಟ್ಟಿನ ಕಪ್ ವಿತರಿಸಿ, ಅವರು ಮಾದರಿ ಶಿಕ್ಷಕಿ ಎನಿಸಿದ್ದಾರೆ. ಪ್ರದೇಶ ಸಮಾಚಾರಕ್ಕಾಗಿ ಶಿಕ್ಷಕಿ ಜಲಜಾಕ್ಷಿ ಕುಕ್ಕುಜೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

ಜಲಜಾಕ್ಷಿ ಕುಕ್ಕುಜೆ ಧ್ವನಿ 46 ಸೆಕೆಂದುಗಳು

<><><>

ಬಾಲ ಕಾರ್ಮಿಕರ ರಕ್ಷಣೆಗೆ ಟಾಸ್‌ಫೋರ್ಸ್ ರಚಿಸುವ ಕುರಿತು, ಚಿಂತನೆ ನಡೆದಿದೆ ಎಂದು, ಕಾರ್ಮಿಕ ಖಾತೆ ಸಚಿವ ಸಂತೋ ್ ಲಾಡ್ ತಿಳಿಸಿದ್ದಾರೆ. ವಿಜಯಪುರದಲ್ಲಿ ಕಾರ್ಮಿಕ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿದ ಸಚಿವರು, ಬಡ ಕುಟುಂಬದ ಮಕ್ಕಳು ವಿದ್ಯಾಭ್ಯಾಸ ಬಿಟ್ಟು, ದುಡಿಮೆಯಲ್ಲಿ ತೊಡಗುವುದನ್ನು ತಡೆಯಬೇಕು. ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳುವ ಸ್ಥಳಗಳನ್ನು ಗುರುತಿಸಿ, ಅವರ ರಕ್ಷಣೆಗೆ ಮುಂದಾಗುವಂತೆ ಸೂಚಿಸಿದರು.

<><><>

ಹೃದಯ ಸ್ತಂಭನಕ್ಕೆ ಒಳಗಾದ ವ್ಯಕ್ತಿಗೆ ನೀಡಬೇಕಾದ, ಪ್ರಥಮ ಚಿಕಿತ್ಸೆ ಸಿ.ಪಿ.ಆರ್. ಸೇರಿದಂತೆ, ಜಾಗೃತಿ ಮೂಡಿಸುವ ಪಾಠವನ್ನು, ಎಸ್.ಎಸ್.ಎಲ್.ಸಿ. ಹಾಗೂ ಪಿ.ಯು.ಸಿ. ವಿದ್ಯಾರ್ಥಿಗಳ ಶೈಕ್ಷಣಿಕ ಪಠ್ಯದಲ್ಲಿ ಅಳವಡಿಸಲು, ಶಿಕ್ಷಣ ಇಲಾಖೆಗೆ ಪ್ರಸ್ತಾವ ಸಲ್ಲಿಸಲಾಗಿದೆ ಎಂದು, ಆರೋಗ್ಯ ಖಾತೆ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

<><><>

ಬೆಳಗಾವಿಯ ಮರಾಠಾ ಲಘು ಪದಾತಿ ದಳದ ಕೇಂದ್ರದಲ್ಲಿ, 'ಅಗ್ನಿ ವೀರ' ತರಬೇತಿ ಪೂರ್ಣಗೊಳಿಸಿದ, ಎರಡನೇ ತಂಡದ ನಿರ್ಗಮನ ಪಥ ಸಂಚಲನ ಜರುಗಿತು. 31 ವಾರಗಳ ಸೈನಿಕ ತರಬೇತಿ ಪಡೆದ, 63 ಅಗ್ನಿವೀರರು ಪಥ ಸಂಚಲನದಲ್ಲಿ ಪಾಲ್ಗೊಂಡಿದ್ದರು. ಮರಾಠಾ ಲಘು ಪದಾತಿ ದಳದ ಕಮಾಂಡೆಂಟ್, ಬ್ರಿಗೇಡಿಯರ್ ಜೋಯ್ ದೀಪಸಿಂಗ್ ಪಾಲ್ಗೊಂಡು, ಗೌರವ ವಂದನೆ ಸ್ವೀಕರಿಸಿದರು. ತರಬೇತಿಯ ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸಾಧನೆಗೈದ, ವೈಭವ ಪಾಟೀಲ್ ಅವರಿಗೆ, ನಾಯಕ್ ಯಶವಂತ ಘಾಡ್ಗೆ ಮತ್ತು ವಿಕ್ಟೋರಿಯಾ ಕ್ರಾಸ್ ಪದಕ ಪ್ರದಾನ ಮಾಡಿ, ಗೌರವಿಸಲಾಯಿತು.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಏ  ್ಯನ್ ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ ಮಾಡಿದ, ಭಾರತೀಯ ಕ್ರೀಡಾಪಟುಗಳಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ.

<><><>

ನೆಹರು ಯುವ ಕೇಂದ್ರದ ವತಿಯಿಂದ, ಧಾರವಾಡ ಜಿಲ್ಲಾ ಮಟ್ಟದ, ಯುವ ಉತ್ಸವ 'ಇಂಡಿಯಾ@2047', ಶುಕ್ರವಾರ 9 ಗಂಟೆಗೆ, ಸೃಜನಾ ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

<><><>

ಧಾರವಾಡದ ಜನತಾ ಶಿಕ್ಷಣ ಸಮಿತಿಯ ಸುವರ್ಣ ಮಹೋತ್ಸವ ಸಮಾರಂಭ 6 ಮತ್ತು 7 ನೇ ತಾರೀಖು ಜರುಗಲಿದೆ. ಡಾಕ್ಟರ್ ವೀರೇಂದ್ರ ಹೆಗ್ಗಡೆಯವರು ಪಾಲ್ಗೊಳ್ಳಲಿದ್ದಾರೆ.

<><><>

ಮಿ  ನ್ ಇಂದ್ರ ಧನು  ್ 3ನೇ ಸುತ್ತಿನ ಲಸಿಕಾಕರಣ ವಿಜಯಪುರ ಜಿಲ್ಲೆಯಾದ್ಯಂತ, ಇದೇ 9 ರಿಂದ 14ರ ವರೆಗೆ ಕೈಗೊಳ್ಳಲಾಗುತ್ತಿದೆ.

<><><>

ರಾಜ್ಯದಲ್ಲಿ ಎರಡು ದಿನ ಮಳೆಯಾಗುವ ಮುನ್ಸೂಚನೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಸೌಹಾರ್ದತೆ ಕಾಪಾಡಲು, ಸರ್ಕಾರದಿಂದ ಅಗತ್ಯ ಕ್ರಮ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಕೇಂದ್ರದ ಮೂರು ಬರ ಅಧ್ಯಯನ ತಂಡಗಳು, ಮುಂದಿನ ವಾರ ರಾಜ್ಯಕ್ಕೆ ಭೇಟಿ – ಎನ್. ಚಲುವರಾಯಸ್ವಾಮಿ.
- ಬಾಪೂಜಿ ಸೇವಾ ಕೇಂದ್ರಗಳಲ್ಲಿ, 44 ಸೇವೆಗಳಿಗೆ ಅವಕಾಶ – ಪ್ರಿಯಾಂಕ್ ಖರ್ಗೆ.
- ವನ್ಯಜೀವಿ ಸಪ್ತಾಹ; ಬೀದರ್‌ನಲ್ಲಿ ಕೃ  ್ಣಮೃಗಗಳ ವನ್ಯಧಾಮ ಶೀಘ್ರ ಸ್ಥಾಪನೆ – ಈಶ್ವರ ಖಂಡ್ರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>